# Bangalore
# Regional News
# 09.01.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ವಿಜಯಪುರದಲ್ಲಿ ೮೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಅಭಿವೃದ್ಧಿ ಯೋಜನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ

೨. ಬಿ-ಖಾತಾದಿಂದ ಎ-ಖಾತಾ ಪರಿವರ್ತನೆ ಮಾಡುವ ಪ್ರಕ್ರಿಯೆ ಸರಳೀಕರಿಸಲು ಕ್ರಮ- ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸ್ಪಷ್ಟನೆ

೩. ಖಾನಾಪೂರದ ನಂದಗಡದಲ್ಲಿ ಸಂಗೊಳ್ಳಿ ರಾಯಣ್ಣ ವಸ್ತು ಸಂಗ್ರಹಾಲಯದ ಕಾಮಗಾರಿ ಪೂರ್ಣ- ಇದೇ ೧೯ರಂದು ಲೋಕಾರ್ಪಣೆ

೪. ಉತ್ತರಕನ್ನಡ ಜಿಲ್ಲೆಯ ದಾಂಡೇಲಿಯಲ್ಲಿ ಇದೇ ೧೬ರಿಂದ ಹಾರ್ನ್‌ಬಿಲ್ ಹಬ್ಬ

**<><*<><>*><>**

ವಿಜಯಪುರದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ೮೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಬದ್ಧವಾಗಿರುವ ರಾಜ್ಯ ಸರ್ಕಾರ ವಿಜಯಪುರದಲ್ಲಿಂದು ೮೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು. ಜಿಲ್ಲೆಯ ಜನರ ಬಹುದಿನಗಳ ಬೇಡಿಕೆಯಾಗಿದ್ದ ವೈದ್ಯಕೀಯ ಕಾಲೇಜನ್ನು ಪಿಪಿಪಿ ಮಾದರಿಯಲ್ಲಿ ನಿರ್ಮಿಸಲು ಹಿಂದಿನ ಸರ್ಕಾರ ನಿರ್ಧರಿಸಿತ್ತು. ಆದರೆ ಮುಂದಿನ ದಿನಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನೇ ಸ್ಥಾಪಿಸಲಾಗುವುದು ಎಂದು ಭರವಸೆ ನೀಡಿದರು. ವಿಜಯಪುರ ಭಾಗದ ಸೈಕ್ಲಿಸ್ಟ್‌ಗಳ ಪ್ರತಿಭೆಯನ್ನು ಗುರುತಿಸಿರುವ ಸರ್ಕಾರ ಇಲ್ಲಿ ವೆಲೊಡ್ರಮ್ ಅನ್ನು ಉದ್ಘಾಟಿಸಿದೆ ಎಂದರು.

**<><*<><>*><>**

ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಜಿಬಿಎ ಕೇಂದ್ರ ಕಚೇರಿಯಲ್ಲಿ ಇಂದು ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ನಗರದ ಪ್ರಮುಖ ಅಭಿವೃದ್ಧಿ ಯೋಜನೆಗಳು ಹಾಗೂ ಆಡಳಿತಾತ್ಮಕ ಬದಲಾವಣೆಗಳ ಕುರಿತು ಮಾಹಿತಿ ಹಂಚಿಕೊಂಡರು. ಸರ್ಕಾರ ಹೊರಡಿಸಿರುವ ಕರಡು ವಾರ್ಡ್ ವಾರು ಮೀಸಲಾತಿ ಅಧಿಸೂಚನೆಯ ಬಗ್ಗೆ ಮಾತನಾಡಿದ ಆಯುಕ್ತರು, ಗ್ರೇಟರ್ ಬೆಂಗಳೂರು ಅಧಿನಿಯಮದ ಅಡಿಯಲ್ಲಿ ನಗರದ ಐದು ನಗರ ಪಾಲಿಕೆಗಳ ಒಟ್ಟು ೩೬೯ ವಾರ್ಡ್‌ಗಳಿಗೆ ಸರ್ಕಾರವು ಕರಡು ಮೀಸಲಾತಿ ಅಧಿಸೂಚನೆಯನ್ನು ಹೊರಡಿಸಿದೆ. ಜನಸಂಖ್ಯೆ ಮತ್ತು ನಿಗದಿತ ಮಾನದಂಡಗಳ ಆಧಾರದ ಮೇಲೆ ಸೀಟುಗಳನ್ನು ಹಂಚಿಕೆ ಮಾಡಲಾಗಿದೆ. ಚುನಾವಣೆ ಹಾಗೂ ಆಡಳಿತಾತ್ಮಕ ಸುಧಾರಣೆಯ ದೃಷ್ಟಿಯಿಂದ ಈ ಪ್ರಕ್ರಿಯೆ ಅತ್ಯಂತ ನಿರ್ಣಾಯಕವಾಗಿದೆ ಎಂದರು. ನಗರದ ಲಕ್ಷಾಂತರ ಆಸ್ತಿ ಮಾಲೀಕರಿಗೆ ಸಿಹಿಸುದ್ದಿ ನೀಡಿರುವ ಅವರು, ಬಿ-ಖಾತಾದಿಂದ ಎ-ಖಾತಾ ಪರಿವರ್ತನೆ ಮಾಡುವ ಪ್ರಕ್ರಿಯೆಯನ್ನು ಇನ್ನಷ್ಟು ಸರಳಗೊಳಿಸಲಾಗುವುದು. ಆಸ್ತಿಗಳ ಗೈಡೆನ್ಸ್

ಮೌಲ್ಯದ ಶೇಕಡ ೫ ರಷ್ಟು ಶುಲ್ಕದೊಂದಿಗೆ ಭೂಪರಿವರ್ತನೆ ಹಾಗೂ ನಕ್ಷೆ ಮಂಜೂರಾತಿ ಶುಲ್ಕಗಳನ್ನು ಪಾವತಿಸುವ ಮೂಲಕ ಮಾಲೀಕರು ತಮ್ಮ ಆಸ್ತಿಗೆ ಕಾನೂನುಬದ್ಧ ಹಕ್ಕನ್ನು ಪಡೆಯಬಹುದಾಗಿದೆ ಎಂದರು. ಈಗಾಗಲೇ ಸುಮಾರು ೫ ಸಾವಿರ ಅರ್ಜಿಗಳು ಬಂದಿದ್ದು, ಇದರಿಂದ ಸರ್ಕಾರಕ್ಕೆ ಹೆಚ್ಚಿನ ಆದಾಯ ಬರುವುದಲ್ಲದೆ ಲಕ್ಷಾಂತರ ಜನರಿಗೆ ಅನುಕೂಲವಾಗಲಿದೆ. ದೊಡ್ಡ ಅಪಾರ್ಟ್‌ಮೆಂಟ್‌ಗಳಿಗಿಂತ ಚಿಕ್ಕ ಪ್ಲಾಟ್‌ಗಳಲ್ಲಿ ಮನೆ ಕಟ್ಟಿದವರಿಗೆ ಇದು ಹೆಚ್ಚಿನ ಪ್ರಯೋಜನ ನೀಡಲಿದೆ. ನಿಯಮಾನುಸಾರ ಅಗತ್ಯವಿರುವ ಕ್ರಮಗಳನ್ನು ಕೈಗೊಂಡು ಸಾರ್ವಜನಿಕರಿಗೆ ಕಾನೂನುಬದ್ಧ ಆಸ್ತಿ ಹಕ್ಕು ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿದರು. ನಗರದ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಎಂ.ಜಿ. ರಸ್ತೆ, ಡಿ.ವಿ.ಜಿ ರಸ್ತೆ ಸೇರಿದಂತೆ ೨೩ ಪ್ರಮುಖ ಕಾರಿಡಾರ್‌ಗಳಲ್ಲಿ ಪೇ ಅಂಡ್ ಪಾರ್ಕಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ. ಇದಕ್ಕಾಗಿ ನಾಳೆ ಟೆಂಡರ್ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿಸಿದರು. ಇದರ ಜೊತೆಗೆ ಆಶ್ರಯ ಯೋಜನೆಯಡಿ ಒಂಟಿ ಮನೆ ನಿರ್ಮಿಸಿಕೊಂಡಿರುವ ಫಲಾನುಭವಿಗಳಿಗೆ ನೀಡಬೇಕಾದ ೫ ಲಕ್ಷ ರೂಪಾಯಿ ಸಬ್ಸಿಡಿ ಹಣದ ವಿಳಂಬದ ಬಗ್ಗೆಯೂ ಸ್ಪಷ್ಟನೆ ನೀಡಿದ ಅವರು ಪಾಲಿಕೆಗಳ ವಿಂಗಡಣೆಯಿಂದಾಗಿ ಪರಿಶೀಲನೆ ಪ್ರಕ್ರಿಯೆ ತಡವಾಗಿದ್ದು, ಮುಂದಿನ ಹತ್ತು ದಿನಗಳಲ್ಲಿ ಅರ್ಹ ಫಲಾನುಭವಿಗಳಿಗೆ ಹಣ ಬಿಡುಗಡೆಯಾಗಲಿದೆ ಎಂದು ಭರವಸೆ ನೀಡಿದರು.

**<><*<><>*><>**

ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲೂಕಿನ ನಂದಗಡದಲ್ಲಿ ೭೫ ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲಾದ ವೀರಭೂಮಿ ಸಂಗೊಳ್ಳಿ ರಾಯಣ್ಣ ವಸ್ತು ಸಂಗ್ರಹಾಲಯದ ಕಾಮಗಾರಿ ಪೂರ್ಣಗೊಂಡಿದ್ದು, ಇದೇ ೧೯ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವಾರಾಜ್ ತಂಗಡಗಿ ತಿಳಿಸಿದ್ದಾರೆ. ನಂದಗಡದಲ್ಲಿ ಇಂದು ವಸ್ತು ಸಂಗ್ರಹಾಲಯದ ಪರಿವೀಕ್ಷಣೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳಯಾಳಂ ಭಾಷೆಯ ಮಸೂದೆಯೊಂದನ್ನು ಕೇರಳ ಸರ್ಕಾರ ತನ್ನ ವಿಧಾನಸಭೆಯಲ್ಲಿ ಅಂಗೀಕರಿಸಿರುವುದು ಕಾಸರಗೋಡು ಸೇರಿದಂತೆ ಕೇರಳ ಗಡಿಭಾಗದ ನೆಲಸಿರುವ ಏಳುವರೆ ಲಕ್ಷ ಕನ್ನಡರಿಗರಿಗೆ ಮತ್ತು ಅಲ್ಲಿರುವ ೨೧೦ ಕನ್ನಡ ಮಾಧ್ಯಮ ಶಾಲೆಗಳಿಗೆ ತೊಂದರೆಯುಂಟು ಮಾಡಲಿದೆ ಎಂದರು. ಸಂವಿಧಾನದ ೩೫೦ ಬಿ ಪರಿಚ್ಛೇದ ಭಾಷಾ ಅಲ್ಪಸಂಖ್ಯಾತ ಹಿತಾಸಕ್ತಿ ಕಾಪಾಡುವ ಹಿನ್ನಲೆಯಲ್ಲಿ ಈ ಮಸೂದೆ ವಜಾಗೊಳಿಸುವಂತೆ ಮುಖ್ಯಮಂತ್ರಿ ನೇತೃತ್ವದಲ್ಲಿ ನಿಯೋಗವೊಂದು ರಾಷ್ಟ್ರಪತಿಯವರನ್ನು ಭೇಟಿ ಮಾಡಿ ಆಗ್ರಹಿಸಲಿದ್ದು, ಕೇರಳ ರಾಜ್ಯಪಾಲರು ಮಸೂದೆಗೆ ಅಂಕಿತ ಹಾಕದಂತೆ ಒತ್ತಾಯಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಉತ್ತರಕನ್ನಡ ಜಿಲ್ಲೆಯ ದಾಂಡೇಲಿಯ ಹಾರ್ನ್‌ಬಿಲ್ ಭವನದಲ್ಲಿ ಇದೇ ೧೬ ಮತ್ತು ೧೭ರಂದು ಹಾರ್ನ್‌ಬಿಲ್ ಹಬ್ಬ ನಡೆಯಲಿದ್ದು, ದೇಶ ಹಾಗೂ ರಾಜ್ಯದ ಪಕ್ಷಿ ಪ್ರಿಯರು ಈ ಹಬ್ಬದಲ್ಲಿ ಭಾಗವಹಿಸಲಿದ್ದಾರೆ ಎಂದು ದಾಂಡೇಲಿ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಚೌಹಾಣ್ ತಿಳಿಸಿದ್ದಾರೆ. ದಾಂಡೇಲಿ ನಗರದ ಹಾರ್ನ್‌ಬಿಲ್ ಸಭಾ ಭವನದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಹಾರ್ನ್‌ಬಿಲ್ ಹಬ್ಬದ ನಿಮಿತ್ತವಾಗಿ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಹಾರ್ನ್‌ಬಿಲ್ ಪಕ್ಷಿ ಜಾಗೃತಿಗಾಗಿ ಚಿತ್ರಕಲಾ, ನಿಬಂಧ, ರಸ ಪ್ರಶ್ನೆ, ಕೇ ಮಾಡೆಲ್ ಸ್ಪರ್ಧೆಯನ್ನು ಆಯೋಜಿಸಲಾಗುತ್ತಿದೆ ಎಂದರು. ಎರಡು ದಿನಗಳ ಕಾಲ ನಡೆಯುವ ಈ ಹಬ್ಬದ ಉದ್ಘಾಟನೆಗೂ ಮುನ್ನ ಇದೇ ೧೬ರಂದು ನಗರಸಭೆಯ ಆವರಣದಿಂದ ಶಾಲಾ-ಕಾಲೇಜು

ವಿದ್ಯಾರ್ಥಿಗಳೊಂದಿಗೆ ವಿವಿಧ ಕಲಾ ತಂಡಗಳ ಭಾಗವಹಿಸುವಿಕೆಯಲ್ಲಿ ಹಾರ್ನ್‌ಬಿಲ್ ಜಾಗೃತಿ ಜಾಥಾ ನಡೆಯಲಿದೆ. ಎರಡು ದಿನಗಳ ಈ ಕಾರ್ಯಕ್ರಮದಲ್ಲಿ ಹಾರ್ನ್‌ಬಿಲ್ ಪಕ್ಷಿಗಳ ಜೀವನ ಕ್ರಮ ಹಾಗೂ ಸಂತತಿ, ಅದರ ರಕ್ಷಣೆಯ ಕುರಿತಂತೆ ತಾಂತ್ರಿಕ ವಿಚಾರ ಗೋಷ್ಠಿಗಳು ನಡೆಯಲಿವೆ. ಹಾರ್ನ್‌ಬಿಲ್ ಪಕ್ಷಿ ಜಾಗೃತಿಗಾಗಿ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಲಾಗುತ್ತದೆ.

<><*<><>*><>

ಸಾಮಾಜಿಕವಾಗಿ ಕ್ರಾಂತಿಕಾರಕ ಬದಲಾವಣೆಗೆ ಕಾರಣವಾಗಿದ್ದ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಗೆ ಕೇಂದ್ರ ಸರಕಾರ ಅಡ್ಡಗಾಲು ಹಾಕಿದೆ. ಈ ಮೂಲಕ ಪಂಚಾಯತ್ ರಾಜ್ ವ್ಯವಸ್ಥೆಗೂ ಅಡ್ಡಿಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಕ್ರಮ ವಿರೋಧಿಸಿ ರಾಜ್ಯ ಸರ್ಕಾರ ವಿಶೇಷ ಅಧಿವೇಶನ ಕರೆಯುವ ಚಿಂತನೆಯನ್ನೂ ನಿನ್ನೆಯ ಸಭೆಯಲ್ಲಿ ಮುಖ್ಯಮಂತ್ರಿ ಪ್ರಸ್ತಾವಿಸಿದ್ದಾರೆ. ರಾಷ್ಟ್ರೀಯ ಕಾರ್ಯಕಾರಿ ಸಮಿತಿಯಲ್ಲೂ ಯೋಜನೆಯ ಕಾನೂನು ತಿದ್ದುಪಡಿ ಬಗ್ಗೆ ಚರ್ಚೆಯಾಗಿದೆ. ರಾಜ್ಯದಲ್ಲೂ ಹೋರಾಟ ನಡೆಯಲಿದೆ. ಅಧಿವೇಶನದಲ್ಲೂ ಇದರ ಬಗ್ಗೆ ಚರ್ಚೆಯಾದಾಗ ಎಲ್ಲಾ ಪಕ್ಷದವರೂ ಅವರವರ ಅಭಿಪ್ರಾಯ ತಿಳಿಸಲು ಸಾಧ್ಯವಾಗಲಿದೆ ಎಂದರು.

<><*<><>*><>

ಆಹಾರದ ಮಹತ್ವದ ಕುರಿತು ಎಲ್ಲರಲ್ಲಿ ಜಾಗೃತಿ ಮೂಡುವುದು ಅಗತ್ಯವಾಗಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯದಲ್ಲಿಂದು ವಿವಿಧ ಇಲಾಖೆ ಹಾಗೂ ಸಂಸ್ಥೆಗಳು ಜಂಟಿಯಾಗಿ ಆಯೋಜಿಸಿದ್ದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ-೨೦೨೫ ಆಹಾರ ಸುರಕ್ಷತೆ ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ೩೦-೪೦ ವರ್ಷಗಳ ಹಿಂದೆ ಭಾರತ ಆಹಾರದ ಕೊರತೆಯನ್ನು ಎದುರಿಸುತ್ತಿತ್ತು ಆದರೆ ಇಂದು ಬೇರೆ ದೇಶಗಳಿಗೆ ಭಾರತ ಆಹಾರ ರಫ್ತು ಮಾಡುತ್ತಿದೆ. ಕಾನೂನು ಬಗ್ಗೆ ಎಲ್ಲರೂ ಜಾಗೃತರಾಗಿ, ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು. ಬಡವರು ಹಾಗೂ, ಸಾಮಾನ್ಯ ಜನಕ್ಕೂ ಆಹಾರ ಒದಗಿಸುವ ಕೆಲಸವಾಗಬೇಕು. ಕಾನೂನು ಜಾರಿ ಗೊಳಿಸಿ ಗ್ರಾಹಕರ ಹಿತ ಕಾಯುವುದು ಸರ್ಕಾರದ ಕರ್ತವ್ಯವಾಗಿದೆ ಎಂದರು. ಡಿಜಿಟಲ್ ನ್ಯಾಯದ ಮೂಲಕ ಪರಿಣಾಮಕಾರಿ ಹಾಗೂ ತ್ವರಿತ ವಿಲೇವಾರಿ ಎಂಬುದು ಈ ಕಾರ್ಯಕ್ರಮದ ಘೋಷವಾಕ್ಯವಾಗಿತ್ತು.

<><*<><>*><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಸಾಮಾನ್ಯ ಜನರಿಗೆ ನೆರವಾಗಲೆಂದು ಕೇಂದ್ರ ಸರ್ಕಾರದ ನೂತನ ಆಧಾರ್ ಸೇವಾ ಕೇಂದ್ರಕ್ಕೆ ಚಾಲನೆ ನೀಡಲಾಗಿದೆ. ಮೈಸೂರಿನ ರಾಮವಿಲಾಸ ರಸ್ತೆಯಲ್ಲಿ ನೂತನವಾಗಿ ಆರಂಭಗೊಳ್ಳುತ್ತಿರುವ ಆಧಾರ್ ಕೇಂದ್ರಕ್ಕೆ ಆಧಾರ್ ಸೇವೆ ಪಡೆಯಲು ಬಂದಿದ್ದ ವಿಶೇಷಚೇತನ ರಿಸ್ವಾನ್ ಮುಖಾಂತರ ಸೇವಾ ಕಾರ್ಯಕ್ಕೆ ಚಾಲನೆ ನೀಡಲಾಯಿತು. ನಂತರ ಕರ್ನಾಟಕದ ಆಧಾರ್ ಸೇವಾ ಕೇಂದ್ರದ ಮುಖ್ಯಸ್ಥ ಮನೋಜ್ ಕುಮಾರ್ ಮಾತನಾಡಿ, ಸಾರ್ವಜನಿಕರಿಗೆ ಆಧಾರ್ ಸೇವೆ ಒದಗಿಸುವ ನಿಟ್ಟಿನಲ್ಲಿ ಮೂರು ಹಂತಗಳಲ್ಲಿ ಆಧಾರ್ ಸೇವಾ ಕೇಂದ್ರ ಆರಂಭಿಸಲಾಗುತ್ತಿದೆ. ಮೊದಲ ಹಂತದ ೫ನೇ ಕೇಂದ್ರ ಇದಾಗಿದ್ದು ಹಂತ ಹಂತವಾಗಿ ರಾಜ್ಯದಲ್ಲಿ ೨೩ ಕೇಂದ್ರಗಳನ್ನು ಆರಂಭಿಸಲು ಮುಂದಾಗಿರುವುದಾಗಿ ತಿಳಿಸಿದರು. ಹೊರ ರಾಜ್ಯದಿಂದ ಬಂದಿರುವವರಿಗೂ ಈ ಸೇವಾ ಕೇಂದ್ರದಲ್ಲಿ

ಸೇವೆ ಒದಗಿಸಲಿದ್ದು, ಹೊಸದಾಗಿ ಆಧಾರ್ ಮಾಡಿಸಿಕೊಳ್ಳುವವರಿಗೆ ಯಾವುದೇ ಶುಲ್ಕವಿರುವುದಿಲ್ಲ, ಇದರ ಸೇವೆಯನ್ನು ಎಲ್ಲರು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

**<><*<><>*><>**

ಸಾಮಾಜಿಕ ಮಾಧ್ಯಮಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಮಕ್ಕಳನ್ನು ಶೋಷಣೆಯಿಂದ ರಕ್ಷಿಸಲು ಪೊಲೀಸರು ವಾರದಲ್ಲಿ ನಾಲ್ಕು ದಿನ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸಲಹೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ವಿಕಾಸ ಸೌಧದಲ್ಲಿ ಮಕ್ಕಳ ನಿಧಿ ಭಾರತದ ಸಹಯೋಗದೊಂದಿಗೆ ಆಯೋಜಿಸಿದ್ದ 'ಮಕ್ಕಳ ಆನ್‌ಲೈನ್ ಸುರಕ್ಷತೆ' ಕುರಿತು ಜಿಲ್ಲಾ ಮಟ್ಟದ ಪೊಲೀಸ್ ಅಧಿಕಾರಿಗಳ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**